# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 18.12.2021 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶ್ರೀ ವೆಂಕಟರಾಜು | ಸದಸ್ಯರು |
| 4 | ಶ್ರೀ ಎನ್ ವೆಂಕಟೇಶ | ಕಂದಾಯ ಮೌಲ್ಯಮಾಪಕರು |
| 5 | ಶ್ರೀ ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ತಿಪ್ಪೇಸ್ವಾಮಿ ಕೆ ಓ | ಕಿ.ಮ.ಆ ಸಹಾಯಕ, ಹೆಗ್ಗನಹಳ್ಳಿ |
| 7 | ಶ್ರೀ ಎಸ್.ಪ್ರವೀಣ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

<u>ವಿಷಯ ಸಂಖ್ಯೆ: 1:-</u> ಹಿಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ

ವಾರ್ಡ್ ನಂ.71 ರ ಸಹಾಯಕ ಅಭಿಯಂತರರು ಮಾತನಾಡಿ, ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ಹೆಗ್ಗನಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಗಜಾನನ ನಗರದ 2ನೇ ಮುಖ್ಯರಸ್ತೆಗೆ ದಿ॥ ಪುನೀತ್ ರಾಜ್ ಕುಮಾರ್ ರಸ್ತೆ ಎಂದು ನಾಮಕರಣ ಮಾಡುವ ಸಂಬಂಧ ಸಮುಚ್ಛಿತ ಮಾರ್ಗದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ & ಅನುಮತಿಯನ್ನು ಪಡೆದುಕೊಳ್ಳುವಂತೆ ಸೂಚಿಸಿ, ಮೇಲಾಧಿಕಾರಿಗಳಿಗೆ ಈ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 2:– ರಸ್ತೆಗುಂಡಿಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ವಿಷಯ ಸಂಖ್ಯೆ: 3 :– ಸುಂಕದಕಟ್ಟೆ ಹೊಯ್ಸಳ ನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ**

ವಾರ್ಡ್ ಕಮಿಟಿ ಸದಸ್ಯರು ಹಾಗೂ ಸುಂಕದಕಟ್ಟೆ ನಾಗರೀಕರ ಹಿತರಕ್ಷಣಾ ವೇದಿಕೆ (ರಿ). ಅಧ್ಯಕ್ಷರೂ ಆದ ಶ್ರೀ ವೆಂಕಟರಾಜು ರವರು ಮಾತನಾಡಿ, ಸುಂಕದಕಟ್ಟೆ ಹೊಯ್ಸಳನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ ಪತ್ರ ಮುಖೇನ ಸಭೆಯ ಗಮನಕ್ಕೆ ತಂದಿದ್ದು, ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಸಲಹೆ ನೀಡಬೇಕೆಂದು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಪತ್ರದಲ್ಲಿ ತಿಳಿಸಿರುವ ಸಮಸ್ಯೆಗಳ ಬಗ್ಗೆ ಗಮನ ಹರಿಸಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳ ಗಮನ ಸೆಳೆದು ಕ್ರಮ ಕೈಗೊಳ್ಳುವಂತೆ ತಿಳಿಸಲು ಕಾರ್ಯದರ್ಶಿ ರವರಿಗೆ ತಿಳಿಸಿದರು.

- **ವಿಷಯ ಸಂಖ್ಯೆ:4**

**ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್‌ನ ಹಲವು ಕಡೆಗಳಲ್ಲಿ ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ವತಿಯಿಂದ ರಸ್ತೆ ಅಗೆದಿದ್ದು Restoration ಮಾಡಿರುವುದಿಲ್ಲ ಎಂಬುದಾಗೀ ದೂರುಗಳು ಬಂದಿದ್ದು, ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ವಾರ್ಡ್ 71ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ರವರಿಗೆ ಕತ್ತರಿಸಿರುವ ರಸ್ತೆಗಳನ್ನು Restoration ಮಾಡುವಂತೆ ನೋಟೀಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ